ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು ಅಂಗೀಕರಿಸಲ್ಪಟ್ಟಿದೆ.

ಪ್ರಥಮ ಖಂಡ, ಹೆಸರು ಮತ್ತು ಅವತರಣಿಕೆ ವಿಧೇಯಕದ ಅಂಗವಾಗಿದೆ.

ಅಧ್ಯಕ್ಷರು; ಮಾನ್ಯ ಸಚಿವರು ಈಗ ಅಂಗೀಕಾರ ಪ್ರಸ್ತಾವವನ್ನು ಮಂಡಿಸಬಹುದು.

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು): ಮಾನ್ಯ ಅಧ್ಯಕ್ಷರೆ, ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು; ಪಸ್ತಾವವನ್ನು ಮಂಡಿಸಲಾಗಿದೆ.

ಅದನ್ನು ಈಗ ಸಭೆಯ ಮತಕ್ಕೆ ಹಾಕುತ್ತೇನೆ.

ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ 2011ನೇ ಸಾಲಿನ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು ಈ ಸಭೆಯು ಅಂಗೀಕರಿಸಬೇಕು

ಪ್ರಸ್ತಾವದ ಪರವಾಗಿರುವವರು "ಹೌದು" ಎಂದು ಸೂಚಿಸಬೇಕು.

ಪ್ರಸ್ತಾವದ ವಿರೋಧವಾಗಿರುವವರು "ಇಲ್ಲ" ಎಂದು ಸೂಚಿಸಬೇಕು.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ ಎಂದು ಭಾವಿಸುತ್ತೇನೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವವು "ಹೌದು" ಎನ್ನುವವರ ಪರವಾಗಿದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿದೆ ಮತ್ತು ವಿಧೇಯಕಕ್ಕೆ ಅನುಮೋದನೆ ದೊರಕಿದೆ.

15. ಪ್ರಸ್ತಾವನೆ:

ವಿಷಯ: ದಿನಾಂಕ: 30–12–2009 ಮತ್ತು 11–10–2010 ಅಂದರೆ ಸಭಾಧ್ಯಕ್ಷರ ಚುನಾವಣೆಯ ದಿವಸ ಮತ್ತು ವಿಶ್ವಾಸಮತ ಯಾಚನೆಯ ಸಂದರ್ಭದಲ್ಲಿ ಸದನದಲ್ಲಿ ನಡೆದ ಅಹಿತಕರ ಘಟನೆಗಳಿಗೆ ಸಂಬಂಧಿಸಿದಂತೆ

ರಚಿತವಾಗಿದ್ದ ಸದನ ಸಮಿತಿಗಳ ವರದಿ ಮೇಲೆ ಕ್ರಮ ಕೈಗೊಳ್ಳಲು ಅಧಿಕಾರ ನೀಡುತ್ತದೆ.

ಶ್ರೀ ಎಸ್. ಸುರೇಶ್ ಕುಮಾರ್ (ನಗರಾಭಿವೃದ್ಧಿ, ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ಪೌರಾಡಳಿತ ಮತ್ತು ಸ್ಥಳೀಯ ಸಂಸ್ಥೆಗಳು ಹಾಗೂ ಬೆಂಗಳೂರು ಜಲಮಂಡಲಿ ಸಚಿವರು): ಸನ್ಮಾನ್ಯ ಸಭಾಧ್ಯಕ್ಷರೆ, ಇವತ್ತು ಬೆಳಗ್ಗೆ ಸದನದಲ್ಲಿ 30–12–2009 ಮತ್ತು 11–10–2010 ಅಂದರೆ ಈ ಸದನದ ಸಭಾಧ್ಯಕ್ಷರ ಚುನಾವಣೆಯ ದಿವಸ ಮತ್ತು ವಿಶ್ವಾಸಮತ ಯಾಚನೆ ಸಂದರ್ಭದಲ್ಲಿ ಸದನದಲ್ಲಿ ನಡೆದ ಅಹಿತಕರ ಘಟನೆಗಳಿಗೆ ಸಂಬಂಧಿಸಿದಂತೆ ರಚಿತವಾಗಿದ್ದ ಎರಡು ಸದನ ಸಮಿತಿಗಳು ಮಂಡಿಸಿರುವ ವರದಿಗಳ ಮೇಲೆ ಸೂಕ್ತ ಕ್ರಮ ಕೈಗೊಳ್ಳುವ ಸಲುವಾಗಿ ಈ ಸದನ ತಮಗೆ ಅಧಿಕಾರ ನೀಡುತ್ತದೆ ಎಂಬ ಪ್ರಸ್ತಾವನೆಯನ್ನು ಸಭೆಯ ಮುಂದೆ ಮಂಡಿಸುತ್ತೇದ್ದೇನೆ.

ಅಧ್ಯಕ್ಷರು: ಮಾನ್ಯ ಸಚಿವರು ಮಂಡಿಸಿದ ಸದನದ ಸಹಮತಿ ಇದೆ ಎಂದು ಭಾವಿಸುತ್ತೇನೆ.

16. ಹದಿಮೂರನೇ ವಿಧಾನ ಸಭೆಯ ಎಂಟನೇ ಅಧಿವೇಶನದ ಕಾರ್ಯಕಲಾಪಗಳ ಸಂಕ್ಷಿಪ್ತ ವರದಿ:

ಅಧ್ಯಕ್ಷರು: 2011ನೇ ಸಾಲಿನಲ್ಲಿ ಬಹುಶಃ ಹೊಸ ವರ್ಷದ ಪ್ರಾರಂಭದ ಪದ್ಧತಿಯಂತೆ ರಾಜ್ಯಪಾಲರ ಜಂಟಿ ಅಧಿವೇಶನವನ್ನು ಕರೆಯಲಾಗಿತ್ತು. ಒಟ್ಟು 10 ದಿವಸಗಳವರೆಗೆ ಈ ಅಧಿವೇಶನ ನಡೆಯ ಬೇಕೆಂದು ಸರ್ಕಾರದ ಕಡೆಯಿಂದ ಸೂಚನೆ ಕೂಡ ಬಂದಿತ್ತು. ಈ ಅವಧಿಯಲ್ಲಿ ಅನೇಕ ವಿಚಾರಗಳ ಬಗ್ಗೆ ಚರ್ಚೆ ಮಾಡಬೇಕು ಮತ್ತು ಈ ಸದನದ ಮುಖಾಂತರ ಒಳ್ಳೆಯ ಸಂದೇಶವನ್ನು ಇಡೀ ಕರ್ನಾಟಕದ ಜನತೆಗೆ ಕೊಡಬೇಕೆಂದು ಇತ್ತು. ಆದರೆ, ಅತ್ಯಂತ ನೋವಿನಿಂದ ಹೇಳುವುದಾದರೆ, ಈ ವಿಧಾನಸಭೆಯ ಒಂದು ಚರಿತ್ರೆಯಲ್ಲಿಯೇ ಪ್ರಥಮ ಬಾರಿಗೆ ರಾಜ್ಯಪಾಲರ ಭಾಷಣವನ್ನು ಬಹಿಷ್ಕರಿಸುವಂಥ ಮತ್ತು ಓದಲಿಕ್ಕೆ ಬಿಡದೆ ಇರುವಂಥ ಘಟನೆಗಳು ನಡೆಯಿತು. ಅದಾದ ನಂತರ, ಪದ್ಧತಿಯಂತೆ ಸದನ ಸಲಹಾ ಸಮಿತಿಯನ್ನು ನಾನು ಕರೆದಿದ್ದೆ. ಯಾವ್ಯಾವ ವಿಚಾರಗಳನ್ನು ಸದನದಲ್ಲಿ ಮಂಡಿಸಬೇಕು ಮತ್ತು ಪ್ರಸ್ತಾಪ ಮಾಡಬೇಕು ಹಾಗೂ ಸದನ ಹೇಗೆ